ತುಮಕೂರಿನಲ್ಲಿ ಯುವಜನ ಸೇವಾ ನಿಲಯ

೧೪೫೯ (೨೨೬೮) ಶ್ರೀ ಶಫಿ ಅಹಮದ್ (ತುಮಕೂರು):- ಮಾನ್ಯ ಯುವಜನ ಸೇವಾ, ಕ್ರೀಡಾ, ಮತ್ತು ಕನ್ನಡ ಹಾಗೂ ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ತುಮಕೂರಿನಲ್ಲಿ ಯುವಜನ ಸೇವಾ ನಿಲಯ ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ?

ಆ) ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಪ್ರಾರಂಭಿಸಲಾಗುವುದು?

ಶ್ರೀ ಎಸ್. ರಮೇಶ್ (ಯುವಜನ ಸೇವಾ, ಕ್ರೀಡಾ ಮತ್ತು ಕನ್ನಡ ಹಾಗೂ ಸಂಸ್ಕೃತಿ ಸಚಿವರು):-

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಚಿಕ್ಕಮಗಳೂರು ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಯಿಂದ ೧೯೯೧-೯೨ ಸಾಲಿನಲ್ಲಿ ಕಾಮಗಾರಿಗೆ ಮಂಜೂರಾದ ಹಣ

೧೪೬೦ (೧೦೧೩) ಶ್ರೀಮತಿ ಮೋಟಮ್ಮ (ಮೂಡಿಗೆರೆ):- ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಚಿಕ್ಕಮಗಳೂರು ಜಿಲ್ಲೆಗೆ ಸಣ್ಣ ನೀರಾವರಿ ಇಲಾಖೆಯಿಂದ ೧೯೯೧-೯೨ನೇ ಸಾಲಿಗೆ ಎಷ್ಟು ಕಾಮಗಾರಿಗಳು ಮಂಜೂರಾಗಿವೆ? (ತಾಲ್ಲೂಕುವಾರು ವಿವರಣೆ ಕೊಡುವುದು)

ಆ) ಈ ಕಾಮಗಾರಿಗಳ ಅಂದಾಜು ವೆಚ್ಚ ಎಷ್ಟು?

ಶ್ರೀ ಕೆ. ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು):-

ಅ) ೧೯೯೧-೯೨ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಜೂರಾದ ಕಾಮಗಾರಿಗಳು.

ಕ್ರಮ ಸಂಖ್ಯೆ	ತಾಲ್ಲೂಕು	ಸಣ್ಣ ನೀರಾವರಿ ವಿಭಾಗ ಕಾಮಗಾರಿಗಳು	ಕಾವೇರಿ ಜಲ ನಯನ ಪತ ನೀರಾವರಿ ನಿಗಮ ಕಾಮಗಾರಿಗಳು	ಜಿಲ್ಲಾ ಪರಿಷತ್ ಇಂಜಿನಿಯರಿಂಗ್ ವಿಭಾಗದ ಕಾಮಗಾರಿಗಳು
೧.	ಚಿಕ್ಕಮಗಳೂರು	೧೩	೧	೧೭
೨.	ಕಡೂರು	೨೨	೬	೧೨
೩.	ಮೂಡಿಗೆರೆ	–	–	೧೮
೪.	ಕೊಪ್ಪ	–	–	೨೫
೫.	ನರಸಿಂಹರಾಜಪುರ	–	–	೧೪